ಇ) ವಿಶ್ವಬ್ಯಾಂಕ್‌ನಿಂದ ಪಡೆದ ಸಾಲವನ್ನು 25 ವರ್ಷಗಳಲ್ಲಿ ಅರ್ಧ ವಾರ್ಷಿಕ ಕಂತುಗಳಲ್ಲಿ ಮರುಪಾವತಿಸಬೇಕಾಗಿರುತ್ತದೆ. ಮೊದಲನೇ ಕಂತಿನ ಮರುಪಾವತಿಯನ್ನು ದಿನಾಂಕ15.9.2006ರಿಂದ ಪ್ರಾರಂಭಿಸಬೇಕಾಗಿದೆ. ವಿಶ್ವಬ್ಯಾಂಕ್ ನೆರವಿನ ಶೇಕಡ 70 ರಷ್ಟು ಮೊತ್ತಕ್ಕೆ ಬಡ್ಡಿಯನ್ನು ಶೇಕಡ 2.5 ರಷ್ಟು ಪಾವತಿಸಬೇಕಾಗಿದೆ.

ಖಾಸಗಿ ಶಾಲೆಗಳಲ್ಲಿ ಮಾತೃಭಾಷೆಯನ್ನು ಕಡ್ಡಾಯಗೊಳಿಸುವುದು

4582 - ಶ್ರೀ ಅಶೋಕ್ ಆರ್. (ಉತ್ತರಹಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

ಅ) ಖಾಸಗಿ ಶಿಕ್ಷಣ ಸಂಸ್ಥೆಯವರು ನಡೆಸುತ್ತಿರುವ ಶಾಲೆಗಳಲ್ಲಿ ಸರ್ಕಾರವು ಅನುಷ್ಠಾನಕ್ಕೆ ತಂದಿರುವ 1 ರಿಂದ 4ನೇ ತರಗತಿಯವರೆಗೆ ಮಾತೃಭಾಷೆಯನ್ನು ಕಡ್ಡಾಯವಾಗಿ ಕಾರ್ಯರೂಪಕ್ಕೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಎಷ್ಟು ಖಾಸಗಿ ಅನುದಾನಿತ ಶಾಲೆಗಳು ಮಾತೃ ಭಾಷೆಯನ್ನು ಕಡ್ಡಾಯವಾಗಿ 1 ರಿಂದ 4ನೇ ತರಗತಿ ವರೆಗೆ ಕಲಿಸುತ್ತಿವೆ?

ಇ) ಹಾಗಿಲ್ಲದಿದ್ದಲ್ಲಿ, ಆ ಅನುದಾನಿತ ಶಾಲೆಗಳ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಈ) ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಯವರು ಇಷ್ಟ ಬಂದಂತೆ ಚಂದಾ ವಸೂಲಿ ಮಾಡುತ್ತಿರುವುದರ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) 2414

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಬಂದಿದೆ ಮತ್ತು ಅಂತಹ ಸಂಸ್ಥೆಗಳ ವಿರುದ್ಧ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಲು ಕ್ರಮ ಕೈಗೊಂಡಿದೆ.

ರಾಜ್ಯದಲ್ಲಿ "ಶಿಕ್ಷಣ ಅದಾಲತ್" ಬಗ್ಗೆ

4583 - ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 'ಶಿಕ್ಷಣ ಅದಾಲತ್' ಅನ್ನು ಪ್ರಾರಂಭಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಇದರ ಉದ್ದೇಶಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿ 'ಶಿಕ್ಷಣ ಅದಾಲತ್' ಮಾನ್ಯ ಮುಖ್ಯಮಂತ್ರಿಗಳಿಂದ ದಿನಾಂಕ : 22-10-2000 ದಂದು ಪ್ರಾರಂಭವಾಗಿದೆ.

ಆ) ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದ ಸುಧಾರಣೆ ಬಗ್ಗೆ ಶಿಕ್ಷಕರು, ಪೋಷಕರು, ತಜ್ಞರೊಂದಿಗೆ ಚರ್ಚಿಸಿ ಸುಧಾರಣೆ ಕಾರ್ಯ ಯೋಜನೆಯನ್ನು ರೂಪಿಸುವುದು. ಕಡ್ಡಾಯ ಪ್ರಾಥಮಿಕ ಶಿಕ್ಷಣದ ಅನುಷ್ಠಾನದ ಸಮಸ್ಯೆಗಳ ಬಗ್ಗೆ ಚರ್ಚಿಸಿ ಪರಿಹಾರಗಳನ್ನು ಕಂಡುಕೊಳ್ಳುವುದು.

'ಶಿಕ್ಷಣ ಅದಾಲತ್' ನಲ್ಲಿ ಬರುವ ಸಾರ್ವಜನಿಕರ ಶೈಕ್ಷಣಿಕ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವುದು.

ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದ ವಿವಿಧ ಆಯಾಮಗಳನ್ನು ಪರಿಚಯಿಸುವುದು.

ನಗರ ಪ್ರದೇಶದಲ್ಲಿ ಹೆಚ್ಚುತ್ತಿರುವ ಮಧುಮೇಹದ ರೋಗದ ನಿಯಂತ್ರಣ ಕುರಿತು

4584 - ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಗರ ಪ್ರದೇಶಗಳಲ್ಲಿ ಹೆಚ್ಚುತ್ತಾ ಇರುವ ಮಧುಮೇಹ (ಸಕ್ಕರೆ ಖಾಯಿಲೆ) ರೋಗದ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ವಿಶೇಷ ಯೋಜನೆಯನ್ನೇನಾದರೂ ರೂಪಿಸಿದೆಯೇ?

ಆ) ಪ್ರತಿ ಜಿಲ್ಲೆಯ ಆಸ್ಪತ್ರೆಗಳಲ್ಲಿ ಮಧು ಮೇಹ ರೋಗದ ಬಗೆಗೆ ಪ್ರತ್ಯೇಕ ವಿಭಾಗ ಪ್ರಾರಂಭಿಸಿ ತಜ್ಞರನ್ನು ನಿಯೋಜಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?

ಡಾ. ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಜಿಲ್ಲಾ ಮಧುಮೇಹ ನಿಯಂತ್ರಣ ಕಾರ್ಯಕ್ರಮವಿರುತ್ತದೆ. ನಗರ ಪ್ರದೇಶಗಳಿಗೆ ವಿಶೇಷವಾದ ಯೋಜನೆಯ ಇರುವುದಿಲ್ಲ.

ಆ) ಈಗಾಗಲೇ ಆಯಾ ಜಿಲ್ಲೆ ಆಸ್ಪತ್ರೆಗಳಲ್ಲಿ ವೈದ್ಯಕೀಯ ವಿಭಾಗದಲ್ಲಿ ಪರಿಣಿತ ವೈದ್ಯರು ಇದ್ದು, ಅವರು ಈ ಕಾಯಿಲೆಯ ಒಟ್ಟಾರೆ ಉಸ್ತುವಾರಿಯನ್ನು ನೋಡಿಕೊಳ್ಳುತ್ತಿದ್ದಾರೆ. ಪ್ರತ್ಯೇಕ ವಿಭಾಗದ ಅವಶ್ಯಕತೆ ಇರುವುದಿಲ್ಲ.

ರಾಜ್ಯದ ಸರ್ಕಾರಿ ಆಸ್ಪತ್ರೆಗಳ ಅಭಿವೃದ್ಧಿ

4585 - ಶ್ರೀ ಎಂ. ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳ ಅಭಿವೃದ್ಧಿಗಾಗಿ ಸರ್ಕಾರವು, ಸಾಲ ಮತ್ತು ಸಹಾಯಧನವನ್ನು ಪಡೆದಿದೆಯೇ?